# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 448 |
| 2 | ಸದಸ್ಯರ ಹೆಸರು | : | ಶ್ರೀ ಪಿ.ಆರ್.ರಮೇಶ್ (ನಾಮ ನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 22-12-2022 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಟ್ರಾನ್ಸ್‌ಫರ್ ಕೇಂದ್ರಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರದ ಗಮನದಲ್ಲಿದೆಯೇ; | ಹೌದು. |
| ಆ | ಬಂದಿದ್ದಲ್ಲಿ, ಸದರಿ ಕೇಂದ್ರಗಳನ್ನು ನಿರ್ಮಾಣ ಮಾಡಲು ಅನುಸರಿಸುತ್ತಿರುವ ಮಾನದಂಡಗಳ ಸಂಪೂರ್ಣ ಮಾಹಿತಿ ಹಾಗೂ ಸದರಿ ಕೇಂದ್ರಗಳನ್ನು ನಿರ್ಮಾಣ ಮಾಡಲು ತಗಲುವ ವೆಚ್ಚದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು | ಸದರಿ ಕೇಂದ್ರಗಳನ್ನು ಲೋಕೋಪಯೋಗಿ ಇಲಾಖೆಯ ತಾಂತ್ರಿಕ ಅಂಶಗಳನ್ನು ಅಳವಡಿಸಿಕೊಂಡು ನಿರ್ಮಾಣ ಮಾಡಲಾಗುತ್ತಿರುತ್ತದೆ. ಪ್ರತಿ ಘಟಕದ ನಿರ್ಮಾಣಕ್ಕೆ ಅಂದಾಜು ಮೊತ್ತ ರೂ. 6,60,000/- ಗಳಾಗುತ್ತದೆ ಎಂದು ಅಂದಾಜಿಸಲಾಗಿರುತ್ತದೆ. |
| ಇ | ಸದರಿ ಕೇಂದ್ರಗಳನ್ನು ನಿರ್ಮಾಣ ಮಾಡುವುದರಿಂದ ಸಾರ್ವಜನಿಕರಿಗೆ ಉಂಟಾಗುವ ಅನುಕೂಲ ಹಾಗೂ ಪರಿಣಾಮಗಳೇನು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಸದರಿ ಕೇಂದ್ರಗಳನ್ನು ನಿರ್ಮಾಣ ಮಾಡುವುದರಿಂದ ರಸ್ತೆಯಲ್ಲಿ ಕಸ ಚೆಲ್ಲುವಿಕೆಯನ್ನು ತಡೆಯಬಹುದಾಗಿದೆ. ಇದರಿಂದ ವಾಹನ ಸಂಚಾರಕ್ಕೆ/ಪಾದಚಾರಿಗಳಿಗೆ ಉಂಟಾಗಬಹುದಾದ ತೊಂದರೆಗಳನ್ನು ಸಂಪೂರ್ಣವಾಗಿ ತಡೆಯಬಹುದಾಗಿದೆ. ಈ ಕೇಂದ್ರಗಳನ್ನು ಸ್ಥಾಪಿಸುವುದರಿಂದ ನಗರದ ಸೌಂದರ್ಯಕ್ಕೆ ಉಂಟಾಗಬಹುದಾದ ಹಾನಿಯನ್ನು ತಡೆಯಬಹುದಾಗಿದೆ. ಸದರಿ ಕೇಂದ್ರಗಳ ನಿರ್ಮಾಣದಿಂದ ರಸ್ತೆ/ಪಾದಚಾರಿ ಮಾರ್ಗಗಳಲ್ಲಿ ಬೀಳುವ Leachat ಅನ್ನು ಸಹ ನಿಯಂತ್ರಸಬಹುದಾಗಿರುತ್ತದೆ. Compactor /Auto tipper ಗಳು ರಸ್ತೆ ಮೇಲ್ಸೈ ಮೇಲೆ ನಿಲ್ಲುವುದನ್ನು ನಿಯಂತ್ರಿಸುವುದರಿಂದ ಸಂಚಾರ ದಟ್ಟಣೆಯನ್ನು ಸಹ ತಪ್ಪಿಸಬಹುದಾಗಿರುತ್ತದೆ. ಇವುಗಳು Temporary barricade ಗಳಾಗಿದ್ದು, ಸ್ಥಳಾಂತರಕ್ಕೆ ಬಹಳ ಅನುಕೂಲವಾಗುವುದರಿಂದ ಈ ಘಟಕಗಳ ನಿರ್ಮಾಣದಿಂದ ಸಾರ್ವಜನಿಕರಿಗೆ ಬಹಳಷ್ಟು ಅನುಕೂಲಗಳಿರುತ್ತವೆ. |

**ಸಂಖ್ಯೆ: ನಅಇ 926 ಎಂಎನ್‌ವೈ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ